**III ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ರಾಮನಗರ**

**SC.124/2022**

ದಿಃ 02.06.2026.

(ಸಾಕ್ಷಿಗೆ ಪ್ರಮಾಣವಚನವನ್ನು ಬೋಧಿಸಲಾಯಿತು)

**Cw-9 Pw-8**

| | | |
|---|---|---|
| ಹೆಸರು | ಃ | ಹರ್ಷವರ್ಧನಗೌಡ |
| ತಂದೆಯ ಹೆಸರು | ಃ | ರಾಮಯ್ಯ |
| ವಯಸ್ಸು | ಃ | 38 ವರ್ಷ |
| ಉದ್ಯೋಗ | ಃ | ವ್ಯವಸಾಯ |
| ವಾಸಸ್ಥಳ | ಃ | ಅರ್ಚಕರಹಳ್ಳಿ ಗ್ರಾಮ, |

**ಮುಖ್ಯ ವಿಚಾರಣೆಃ ಸರ್ಕಾರಿ ಅಭಿಯೋಜಕರಿಂದಃ**

1. ಈಗ ನೋಡುತ್ತಿರುವ ನಿಪಿ.7 ಅಮಾನತ್ತು ಮಹಜರಿನಲ್ಲಿರುವ ಸಹಿ ನನ್ನದು. ಸಾಕ್ಷಿದಾರರು ಗುರುತಿಸಿದ ಅವರ ಸಹಿಯನ್ನು ನಿಪಿ.7(ಬಿ) ಎಂದು ಗುರುತಿಸಲಾಯಿತು. ದಿಃ 29.07.2022 ರಂದು ನಾನು ರಾಮನಗರ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ನನ್ನ ತಮ್ಮ ಕಾಣೆಯಾದ ಬಗ್ಗೆ ದೂರು ನೀಡಲು ಹೋದ ಕಾಲದಲ್ಲಿ ಪೊಲೀಸರು ನಿ ಪಿ 7 ಮಹಜರಿಗೆ ನನ್ನ ಸಹಿ ಪಡೆದರು. ನಿಪಿ 7 ಮಹಜರ್ ಬಗ್ಗೆ ನನಗೆ ತಿಳಿದಿಲ್ಲ. ನಿಪಿ 7 ಮಹಜರ್ ಅಡಿಯಲ್ಲಿ ಯಾವುದೇ ವಸ್ತುಗಳನ್ನು ಅಮಾನತ್ತು ಪಡಿಸಿಕೊಂಡ ಬಗ್ಗೆ ನನಗೆ ತಿಳಿದಿಲ್ಲ. ನ್ಯಾಯಾಲಯದ ಮುಂದಿರುವ ವಸ್ತುಗಳನ್ನು ನಾನು ಹಿಂದೆ ನೋಡಿರುವುದಿಲ್ಲ.

**(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ, ವಾಟೀ ಸವಾಲು ಮಾಡಲು ಅಭಿಯೋಜಕರು ಕೋರಿದ್ದಾರೆ. ಅದರಂತೆ ಸಾಕ್ಷಿಯನ್ನು ಪ್ರತಿಕೂಲ ಎಂದು ಪರಿಗಣಿಸಿ ವಾಟೀ ಸವಾಲು ಮಾಡಲು ಅಭಿಯೋಜಕರಿಗೆ ಅನುಮತಿ ನೀಡಲಾಗಿದೆ)**

**ವಾಟೀ ಸವಾಲುಃ ಸರ್ಕಾರಿ ಅಭಿಯೋಜಕರಿಂದಃ**

2. ಮೃತ ಅಟ್ಟ ಅಲಿಯಾಸ್ ಬರಿಯಯ್ಯರವರ ಮರಣೋತ್ತರ ಪರೀಕ್ಷಾ ಕಾಲದಲ್ಲಿ ವೈದ್ಯರು ಮೃತನ ದೇಹದಿಂದ ಸಂಗ್ರಹಿಸಿ ಕೊಟ್ಟಿದ್ದ ಮೃತ ಧರಿಸಿದ್ದ ಶರ್ಟ್, ಪ್ಯಾಂಟ್, ಲುಂಗಿ, ಅಂಡರ್ ವೇರ್ ಹಾಗೂ ಮೃತನ ತಲೆಯ ಕೂದಲು ಇತ್ಯಾದಿ ವಸ್ತುಗಳನ್ನು ಪೊಲೀಸರು ಅಮಾನತ್ತುಪಡಿಸಿಕೊಂಡ ಕಾಲದಲ್ಲಿ ಪಂಚ ಸಾಕ್ಷಿಯಾಗಿ ಹಾಜರಿದ್ದು ನಿಪಿ.7 ಮಹಜರಿಗೆ ನನ್ನ ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ. ನಿಪಿ.7 ಮಹಜರ್ ಅಡಿಯಲ್ಲಿ ಅಮಾನತ್ತು ಪಡಿಸಿಕೊಂಡ ವಸ್ತುಗಳು ನ್ಯಾಯಾಲಯದ ಮುಂದಿರುವ ವಸ್ತುಗಳು ಆಗಿರುತ್ತವೆ ಎಂದರೆ ನನಗೆ ತಿಳಿದಿಲ್ಲ. ನ್ಯಾಯಾಲಯದ ಮುಂದಿರುವ ಆರೋಪಿಗಳಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನಿಪಿ.7 ರ ಬರವಣಿಗೆಯ ನಂತರ ನಾನು ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ. ದಾಖಲೆಯ ಒಕ್ಕಣಿಗಳು ನನಗೆ ಅರ್ಥ ಆಗುತ್ತವೆ ಎಂದರೆ ಸರಿ.

**ವಾಟೀ ಸವಾಲು ಆರೋಪಿ ಪರ ವಕೀಲರಿಂದಃ ಇರುವುದಿಲ್ಲ**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸರಿ ಇದೆ ಎಂದು ಸಾಕ್ಷಿ ಒಪ್ಪಿದ್ದಾರೆ

(ಎಸ್.ಎ. ಹಿದಾಯತ್ ಉಲ್ಲಾ ಷರೀಫ್)
III ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ರಾಮನಗರ.